**CC. 240/2018 PW.1**

<u>ದಿನಾಂಕಃ 05-04-2025 ರಂದು **ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**</u>

<u>ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ. ಹೆಚ್. ಎಸ್. ವಕೀಲರಿಂದ</u>

ನಾನು ಈ ಕೇಸಿನ ಪಿರ್ಯಾದಿಯಾಗಿದ್ದು, ನಾನು ಸಾಕ್ಷ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಈಗಾಗಲೇ ಸಲ್ಲಿಸಿರುತ್ತೇನೆ. ಪ್ರಮಾಣಪತ್ರದಲ್ಲಿ ಎಲ್ಲಾ ಮಾಹಿತಿಗಳು ಗೊತ್ತಿದ್ದು, ಸತ್ಯವಾಗಿರುತ್ತದೆ. ಅದರಲ್ಲಿ ಇರುವ ಸಹಿಗಳು ನನ್ನದೇ ಆಗಿರುತ್ತವೆ.

ಫಿರ್ಯಾದುದಾರರಿಗೆ ಯಾರಿಗೆ ಹಣ ಕೊಟ್ಟಿರುತ್ತೀರಿ ಎಂದು ಕೇಳಿದಾಗ ವಕೀಲರು ಆರೊಪಿಯ ಹೆಸರು ಹೇಳಿಂದ ನಂತರ ಸಾಕ್ಷಿ ಆರೋಪಿಯ ಹೆಸರು ಹೇಳಿರುತ್ತಾರೆ.

ಆರೋಪಿ ಕೊಟ್ಟಿರುವ ಒಂದು ಚೆಕ್ಕನ್ನು ನಿಪಿ.1 ಎಂದು ಗುರುತಿಸಲಾಯಿತು. ಅದರಲ್ಲಿರುವ ಆರೋಪಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಬ್ಯಾಂಕಿನ ಹಿಂಬರಹವನ್ನು ನಿಪಿ.2 ಎಂದು ಗುರುತಿಸಲಾಯಿತು. ಆರೋಪಿಗೆ ಕಳಿಸಿರುವ ನೋಟೀಸಿನ ಕಛೇರಿ ಪ್ರತಿಯನ್ನು ನಿಪಿ.3 ಎಂದು ಗುರುತಿಸಲಾಯಿತು. ಅಂಚೆ ರಶೀದಿಯನ್ನು ನಿಪಿ.4 ಎಂದು ಗುರುತಿಸಲಾಯಿತು. ಅಂಚೆ ಲಕೋಟೆಯನ್ನು ನಿಪಿ.5 ಎಂದು ಗುರುತಿಸಲಾಯಿತು. ಕಾರಣ ಆರೋಪಿಯ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕೆಂದು ಕೋರಿಕೊಳ್ಳುತ್ತೇನೆ.

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು )

ಓದಿ ಹೇಳಿ ಕೇಳಿ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ನಾಗಮಂಗಲ.

ಸಾಕ್ಷಿದಾರರ ಸಹಿಃ